**All India Radio: Bangalore**
**National Bulletin In Kannada**
**21.04.2025  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ೧೭ನೇ ನಾಗರಿಕ ಸೇವೆಗಳ ದಿನವಾದ ಇಂದು ನವದೆಹಲಿಯಲ್ಲಿ ಪ್ರಧಾನಮಂತ್ರಿಯವರ ಪ್ರಶಸ್ತಿಗಳನ್ನು ಪ್ರದಾನ ಮಾಡಲಿರುವ ಪ್ರಧಾನಿ
2. ನಾಲ್ಕು ದಿನಗಳ ಅಧಿಕೃತ ಭಾರತ ಭೇಟಿಗೆ ಇಂದು ನವದೆಹಲಿಗೆ ಆಗಮಿಸಲಿರುವ ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್
3. ಜಮ್ಮು-ಕಾಶ್ಮೀರದ ರಾಮ್‌ಬನ್ ನಲ್ಲಿ ಮೇಘಸ್ಫೋಟ ; ಇಂದು ರಕ್ಷಣಾ ಕಾರ್ಯ ಪುನರಾರಂಭ
4. ಡಿಬಿಟಿ ಉಪಕ್ರಮದಿಂದ ಮೂರು ಲಕ್ಷ ೪೮ ಸಾವಿರ ಕೋಟಿ ರೂಪಾಯಿಗಳ ಉಳಿತಾಯ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
5. ಐಪಿಎಲ್ ಟಿ-೨೦ ಕ್ರಿಕೆಟ್ : ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ತಂಡಕ್ಕೆ ೯ ವಿಕೆಟ್‌ಗಳ ಜಯ

<><><><>

೧೭ನೇ ನಾಗರಿಕ ಸೇವೆಗಳ ದಿನದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಇಂದು ಸಾರ್ವಜನಿಕ ಆಡಳಿತದಲ್ಲಿ ಉತ್ಕೃಷ್ಟತೆಗಾಗಿ ಪ್ರಧಾನ ಮಂತ್ರಿಗಳ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಇದೇ ವೇಳೆ ಪ್ರಧಾನಿ, ಸರ್ಕಾರಿ ನೌಕರರನ್ನುದ್ದೇಶಿಸಿ ಮಾತನಾಡಲಿದ್ದಾರೆ.

ಈ ಕುರಿತು ಒಂದು ವರದಿ : ಅಭಯ್ (೩೨ ಸೆಕೆಂಡ್‌ಗಳು)

ಈ ವರ್ಷ, ಜಿಲ್ಲೆಗಳ ಸಮಗ್ರ ಅಭಿವೃದ್ಧಿ, ಮಹತ್ವಾಕಾಂಕ್ಷೆಯ ಬ್ಲಾಕ್‌ಗಳ ಕಾರ್ಯಕ್ರಮ ಮತ್ತು ನಾವೀನ್ಯತೆ ವಿಭಾಗಗಳಲ್ಲಿ ಒಟ್ಟು ೧೪ ಪ್ರಶಸ್ತಿಗಳನ್ನು ಪ್ರಧಾನಿ ಸರ್ಕಾರಿ ನೌಕರರಿಗೆ ನೀಡಲಿದ್ದಾರೆ. ಸರ್ಕಾರಿ ನೌಕರರು ನಾಗರಿಕರ ಹಿತದೃಷ್ಟಿಯಿಂದ ತಮ್ಮನ್ನು ತಾವು ಅರ್ಪಿಸಿಕೊಳ್ಳಲು, ಸಾರ್ವಜನಿಕ ಸೇವೆಗೆ ಬದ್ಧರಾಗಿರಲು ಮತ್ತು ತಮ್ಮ ಕೆಲಸದಲ್ಲಿ ಶ್ರೇಷ್ಠತೆಯತ್ತ ಶ್ರಮಿಸಲು ನಾಗರಿಕ

ಸೇವೆಗಳ ದಿನ ಒಂದು ಸಂದರ್ಭವಾಗಿದೆ. ೧೯೪೭ ರಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಆಡಳಿತ ಸೇವಾ ಅಧಿಕಾರಿಗಳ ಪ್ರಶಿಕ್ಷಣಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ದಿನದ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತದೆ.

<><><><>

ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಇಂದಿನಿಂದ ನಾಲ್ಕು ದಿನಗಳ ಅಧಿಕೃತ ಭಾರತ ಭೇಟಿ ಕೈಗೊಳ್ಳಲಿದ್ದಾರೆ. ಜೆ.ಡಿ.ವ್ಯಾನ್ಸ್ ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದ್ದು, ಈ ವೇಳೆ ಅವರು, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ದ್ವಿಪಕ್ಷೀಯ ಸಂಬಂಧಗಳ ಪ್ರಗತಿ ಮತ್ತು ಕಳೆದ ಫೆಬ್ರವರಿ ೧೩ ರಂದು ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕ ಭೇಟಿಯ ಸಂದರ್ಭದಲ್ಲಿ ಹೊರಡಿಸಲಾದ ಭಾರತ- ಅಮೆರಿಕ ಜಂಟಿ ಹೇಳಿಕೆಯ ಫಲಿತಾಂಶಗಳ ಅನುಷ್ಠಾನದ ಕುರಿತಂತೆ ಚರ್ಚೆ ನಡೆಯಲಿದೆ.

<><><><>

ಜಮ್ಮು ಮತ್ತು ಕಾಶ್ಮೀರದಲ್ಲಿ, ಮೇಘಸ್ಫೋಟ ಮತ್ತು ಭೂಕುಸಿತ ಪೀಡಿತ ರಾಂಬನ್ ಜಿಲ್ಲೆಯಲ್ಲಿ ಪರಿಹಾರ ಹಾಗೂ ರಕ್ಷಣಾ ಕಾರ್ಯಾಚರಣೆ ಇಂದು ಪುನರಾರಂಭಗೊಳ್ಳಲಿವೆ. ಕಾಶ್ಮೀರ ಕಣಿವೆಯನ್ನು ದೇಶದ ಉಳಿದ ಭಾಗಗಳಿಗೆ ಸಂಪರ್ಕಿಸುವ ಪ್ರಮುಖ ರಸ್ತೆಯಾದ ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿ - ೪೪ ಅನ್ನು ಮತ್ತೆ ತೆರೆಯಲು ಅಧಿಕಾರಿಗಳು ಕ್ರಮ ವಹಿಸುತ್ತಿದ್ದಾರೆ. ಭಾರೀ ಗುಡುಗು ಸಹಿತ ಮಳೆ, ಆಲಿಕಲ್ಲು ಮತ್ತು ಹಠಾತ್ ಪ್ರವಾಹ ಸೇರಿದಂತೆ ತೀವ್ರ ಹವಾಮಾನ ಪರಿಸ್ಥಿತಿಗಳು ಈ ಪ್ರದೇಶದಾದ್ಯಂತ ವ್ಯಾಪಕ ಹಾನಿಯನ್ನುಂಟು ಮಾಡಿವೆ. ರಾಂಬನ್ ಜಿಲ್ಲೆಯಲ್ಲಿ ನಿನ್ನೆ ಮೇಘಸ್ಫೋಟದಿಂದ ಉಂಟಾದ ಭೂಕುಸಿತದಲ್ಲಿ ಮೂವರು ಸಾವನ್ನಪ್ಪಿದ್ದಾರೆ. ಆಲಿಕಲ್ಲು ಮತ್ತು ಗುಡುಗು ಸಹಿತ ಭಾರಿ ಮಳೆಯು ಹನ್ನೆರಡಕ್ಕೂ ಹೆಚ್ಚು ಸ್ಥಳಗಳಲ್ಲಿ, ಪ್ರಮುಖವಾಗಿ ನಶ್ರಿ ಮತ್ತು ಬನಿಹಾಲ್ ನಡುವೆ ರಾಷ್ಟ್ರೀಯ ಹೆದ್ದಾರಿಯ ಉದ್ದಕ್ಕೂ ಹಲವಾರು ಸ್ಥಳಗಳಲ್ಲಿ ಭೂಕುಸಿತ ಮತ್ತು ಮಣ್ಣು ಕುಸಿತಕ್ಕೆ ಕಾರಣವಾಯಿತು, ಇದರಿಂದ ಕಾಶ್ಮೀರ ದೇಶದ ಉಳಿದ ಭಾಗದಿಂದ ರಸ್ತೆ ಸಂಪರ್ಕ ಕಡಿದುಕೊಂಡಂತಾಗಿದೆ. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಪಡೆಗಳ ಜೊತೆಗೆ ಪೊಲೀಸ್ ಮತ್ತು ನಾಗರಿಕರ ಜಂಟಿ ಪ್ರಯತ್ನಗಳ ಮೂಲಕ ರಕ್ಷಣಾ ಕಾರ್ಯ ಮುಂದುವರೆದಿದೆ. ಪುನಃ ಮಳೆಯಾಗಿರುವ ಕಾರಣ ರಕ್ಷಣಾ ಕಾರ್ಯಗಳಿಗೆ ಅಲ್ಪಮಟ್ಟಿಗೆ ಹಿನ್ನಡೆಯಾಗಿದೆ ಎಂದು ರಾಮ್‌ಬನ್ ಎಸ್‌ಎಸ್‌ಪಿ ಕುಲಬೀರ್ ಸಿಂಗ್ ಆಕಾಶವಾಣಿಗೆ ತಿಳಿಸಿದ್ದಾರೆ.

ಧ್ವನಿ : ಎಸ್‌ಎಸ್‌ಪಿ ಕುಲಬೀರ್ ಸಿಂಗ್ (೨೯ ಸೆಕೆಂಡ್‌ಗಳು)

<><><><>

ವೃತ್ತಿಪರರಿಗಾಗಿ ಜಗತ್ತು ಭಾರತದತ್ತ ನೋಡುತ್ತಿದೆ ಎಂದು ಕೇಂದ್ರ ಕಲ್ಲಿದ್ದಲು ಸಚಿವ ಜಿ. ಕಿಶನ್ ರೆಡ್ಡಿ ಹೇಳಿದ್ದಾರೆ. ಹೈದರಾಬಾದ್‌ನಲ್ಲಿ ನಿನ್ನೆ ಭಾರತೀಯ ಕಂಪನಿ ಕಾರ್ಯದರ್ಶಿಗಳ ಸಂಸ್ಥೆ ಐಸಿಎಸ್‌ಐ ನ ನೂತನ ಕಟ್ಟಡಕ್ಕೆ ಶಿಲಾನ್ಯಾಸ ನೆರವೇರಿಸಿದ ನಂತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಬೌದ್ಧಿಕ ಮತ್ತು ವೃತ್ತಿಪರ ಕೌಶಲ್ಯಗಳನ್ನು ಅಭಿವೃದ್ಧಿ ಪಡಿಸುವುದು ವೈಯಕ್ತಿಕ ಏಳಿಗೆಗೆ ಮಾತ್ರವಲ್ಲದೆ ಸಮಾಜ ಹಾಗೂ ಜಾಗತಿಕ ಅಭಿವೃದ್ಧಿಗೆ ಕೊಡುಗೆಯಾಗಿದೆ ಎಂದು ಹೇಳಿದರು. ದೇಶದ ಕಾರ್ಪೋರೇಟ್ ವಲಯವನ್ನು ರೂಪಿಸುವಲ್ಲಿ ಕಂಪನಿ ಕಾರ್ಯದರ್ಶಿಗಳು ಪ್ರಮುಖ ಪಾತ್ರ ವಹಿಸಿದ್ದಾರೆ. ಕಾರ್ಪರೇಟ್ ಕಂಪನಿಗಳ ಮೌಲ್ಯಗಳಿಗೆ ಬದ್ಧರಾಗಿ ಕಾನೂನುಗಳ ಪಾರದರ್ಶಕ ಪಾಲನೆಯಿಂದ ಕಂಪನಿ ಕಾರ್ಯದರ್ಶಿಗಳು ದೇಶದ ಕಾರ್ಪೋರೇಟ್ ಆಡಳಿತದ ಬೆನ್ನೆಲುಬಾಗಿದ್ದಾರೆ ಎಂದರು.

<><><><>

ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನೇರ ನಗದು ವರ್ಗಾವಣೆ- ಡಿಬಿಟಿ ಉಪಕ್ರಮ ಸೋರಿಕೆಯನ್ನು ಕಡಿಮೆ ಮಾಡುವ ಮೂಲಕ ಮೂರು ಲಕ್ಷ ೪೮ ಸಾವಿರ ಕೋಟಿ ರೂಪಾಯಿಗಳನ್ನು ಉಳಿಸಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಭಾರತದ ಡಿಬಿಟಿ ವ್ಯವಸ್ಥೆಯ ಪರಿಮಾಣಾತ್ಮಕ ಮೌಲ್ಯಮಾಪನ ಎಂಬ ಶೀರ್ಷಿಕೆಯ ನೀತಿ ಪ್ರಬಂಧವನ್ನು ಉಲ್ಲೇಖಿಸಿ, ಮಾಹಿತಿ ನೀಡಿರುವ ಅವರು, ಈ ಕಲ್ಯಾಣ ವಿತರಣಾ ಮಾದರಿಯಡಿಯಲ್ಲಿ, ಫಲಾನುಭವಿಗಳ ವ್ಯಾಪ್ತಿ ೧೬ ಪಟ್ಟು ಹೆಚ್ಚಾಗಿದೆ ಎಂದು ಹೇಳಿದ್ದಾರೆ. ನೀತಿ ಪ್ರಬಂಧದ ಪ್ರಕಾರ, ೨೦೧೩ ರಲ್ಲಿ ಜಾರಿಗೆ ತರಲಾದ ದೇಶದ ಡಿಬಿಟಿ ವ್ಯವಸ್ಥೆಯು ಪಾರದರ್ಶಕತೆಯನ್ನು ಹೆಚ್ಚಿಸುವ, ಸೋರಿಕೆಗಳನ್ನು ತಡೆಯುವ ಮತ್ತು ನಿಖರವಾದ ನಿಧಿ ವಿತರಣೆಯನ್ನು ಖಚಿತಪಡಿಸುವ ಮೂಲಕ ಕಲ್ಯಾಣ ವಿತರಣೆಯನ್ನು ಮರು ವ್ಯಾಖ್ಯಾನಿಸಿದೆ.

<><><><>

ಕರ್ನಾಟಕದ ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಓಂ ಪ್ರಕಾಶ್ ಅವರನ್ನು ಹತ್ಯೆ ಮಾಡಲಾಗಿದ್ದು, ಬೆಂಗಳೂರಿನ ಹೆಚ್.ಎಸ್.ಆರ್. ಲೇಔಟ್‌ನ ಅವರ ನಿವಾಸದಲ್ಲಿ ನಿನ್ನೆ ರಕ್ತದ ಮಡುವಿನಲ್ಲಿ ಮೃತ ದೇಹ ಪತ್ತೆಯಾಗಿದೆ. ಘಟನಾ ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ

ಕೈಗೊಂಡಿದ್ದಾರೆ. ಬಿಹಾರದ ಚಂಪರಣ್ ಮೂಲದವರಾಗಿದ್ದ ೬೮ ವರ್ಷದ ಓಂ ಪ್ರಕಾಶ್ ೧೯೮೧ರ ತಂಡದ ಐಪಿಎಸ್ ಅಧಿಕಾರಿಯಾಗಿದ್ದರು. ಪ್ರಾಥಮಿಕ ತನಿಖೆಯಲ್ಲಿ ಕೌಟುಂಬಿಕ ಕಲಹದ ಹಿನ್ನೆಲೆ ಈ ಕೊಲೆ ನಡೆದಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಮೃತ ದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸೇಂಟ್ ಜಾನ್ಸ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಓಂ ಪ್ರಕಾಶ್ ಅವರು, ರಾಜ್ಯ ವಿಜಿಲೆನ್ಸ್ ಆಯೋಗ, ಕರ್ನಾಟಕ ಲೋಕಾಯುಕ್ತ ಮತ್ತು ಅಪರಾಧ ತನಿಖಾ ಇಲಾಖೆ ಸಿಐಡಿಯಲ್ಲೂ ಸೇವೆ ಸಲ್ಲಿಸಿದ್ದರು. ಇದರ ಜೊತೆಗೆ ಸಾರಿಗೆ ಆಯುಕ್ತರ ಹುದ್ದೆಯನ್ನು ಅಲಂಕರಿಸಿದ್ದ ಅವರು, ಕಾರವಾರದ ಭಟ್ಕಳ್ ಪ್ರದೇಶದಲ್ಲಿ ನಡೆದ ಕೋಮು ಗಲಭೆಯನ್ನು ನಿಭಾಯಿಸುವಲ್ಲಿ ಯಶಸ್ವಿಯಾಗಿದ್ದರು. ಬೆಂಗಳೂರಿನಲ್ಲಿ ನಡೆದ ಎರಡು ಪ್ರಮುಖ ಭಯೋತ್ಪಾದಕರ ದಾಳಿಗಳ ತನಿಖೆಯಲ್ಲಿ ಓಂ ಪ್ರಕಾಶ್ ಭಾಗಿಯಾಗಿದ್ದರು ಮತ್ತು ಆರೋಪಿಗಳನ್ನು ಬಂಧಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

<><><><>

ಕೆನಡಾದಲ್ಲಿರುವ ಹಿಂದೂ ಹಾಗೂ ಸಿಖ್ ಸಮುದಾಯಗಳು ಖಾಲಿಸ್ತಾನಿ ಪ್ರತ್ಯೇಕತವಾದಿಗಳ ವಿರುದ್ಧ ಬಲವಾದ ಸರ್ಕಾರದ ಕ್ರಮಕ್ಕೆ ಒತ್ತಾಯಿಸಬೇಕೆಂದು ಕೆನಡಾ ಸಂಸದ ಚಂದ್ರ ಆರ್ಯ ಆಗ್ರಹಿಸಿದ್ದಾರೆ. ಬ್ರಿಟಿಷ್ ಕೊಲೊಂಬಿಯಾದಲ್ಲಿ ಲಕ್ಷ್ಮಿ ನಾರಾಯಣ ಮಂದಿರವನ್ನು ಖಾಲಿಸ್ತಾನಿ ಪರವಾದ ಗೋಡೆ ಬರಹದಿಂದ ವಿರೂಪಗೊಳಿಸಿದ ನಂತರ ಈ ಹೇಳಿಕೆ ಹೊರ ಬಂದಿದೆ. ಬ್ರಿಟಿಷ್ ಕೊಲೊಂಬಿಯಾದ ಸರ್ರೆ ನಗರದಲ್ಲಿ ಆಯೋಜಿಸಿದ್ದ ವಿಶ್ವದ ಅತಿದೊಡ್ಡ ವೈಶಾಖಿ ಮೆರವಣಿಗೆ ದಿನದಂದು ಈ ಘಟನೆ ಬೆಳಕಿಗೆ ಬಂದಿದೆ.

<><><><>

ಗಾಜಾದ ಮೇಲೆ ನಡೆದ ಇಸ್ರೇಲ್ ದಾಳಿಯಲ್ಲಿ ನಿನ್ನೆ ಕನಿಷ್ಠ ೨೯ ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿದ್ದಾರೆ. ಕೇಂದ್ರ ಗಾಜಾದ ನಾಗರಿಕ ರಕ್ಷಣಾ ಇಲಾಖೆಯ ಪ್ರಕಾರ, ಇಸ್ರೇಲಿ ವೈಮಾನಿಕ ದಾಳಿಯಿಂದ ೧೦ ಜನರು ಸಾವನ್ನಪ್ಪಿದ್ದಾರೆ ಮತ್ತು ಇತರರು ಗಾಯಗೊಂಡಿದ್ದಾರೆ. ದಕ್ಷಿಣ ಗಾಜಾದಲ್ಲಿ, ಟೆಂಟ್ ಮೇಲೆ ಇಸ್ರೇಲ್ ಡ್ರೋನ್ ದಾಳಿಯಲ್ಲಿ ಒಬ್ಬ ಪ್ಯಾಲೇಸ್ಟಿನಿಯನ್ ಮಹಿಳೆ ಸಾವನ್ನಪ್ಪಿದ್ದಾರೆ ಮತ್ತು ನಾಲ್ವರು ಗಾಯಗೊಂಡಿದ್ದಾರೆ.

<><><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ೯ ವಿಕೆಟ್‌ಗಳಿಂದ ಮಣಿಸಿದೆ. ಮೊದಲು ಬ್ಯಾಟ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ನಿಗದಿತ ೨೦ ಓವರ್‌ಗಳಿಗೆ ೫ ವಿಕೆಟ್ ನಷ್ಟಕ್ಕೆ ೧೭೬ ರನ್ ಗಳಿಸಿತು. ೧೭೭ ರನ್‌ಗಳ ಗುರಿ ಬೆನ್ನತ್ತಿದ ಮುಂಬೈ ಇಂಡಿಯನ್ಸ್ ತಂಡ ಕೇವಲ ೧೫.೪ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ಗೆಲುವು ಸಾಧಿಸಿತು. ರೋಹಿತ್ ಶರ್ಮ ೭೬, ಸೂರ್ಯಕುಮಾರ್ ಯಾದವ್ ೬೮ ರನ್‌ಗಳನ್ನು ಗಳಿಸಿ ತಂಡಕ್ಕೆ ಗೆಲುವು ತಂದುಕೊಟ್ಟರು. ಕೋಲ್ಕೊತ್ತಾದ ಈಡನ್ ಗಾರ್ಡನ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಗುಜರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>